# ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ (ರಿ.), ಚಿತ್ರದುರ್ಗ

e job news visit : www.kpscva

ಸದರಿ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ಖಾಸಗಿ ಅನುದಾನಿತ ಮಹಾರಾಜ ಮದಕರಿನಾಯಕ ಪ್ರಥಮ ವರ್ಷ ಕಲಾ & ವಾಣಿಜ್ಯ ಕಾಲೇಜು, ಚಿತ್ರದುರ್ಗದಲ್ಲಿ ಖಾಲಿ ಇರುವ ಅನುದಾನಿತ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಾಶಿಇ/146/ಖಾಹುಭ ಶಿವಿ 2022-23/ನೇವಿ-2, ದಿ: 28.02.2023 ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ ಇವರ ಪತ್ರ ಸಂಖ್ಯೆ: ಪ್ರಾಕಾಶಿ:ಕಾಶಿಇ:335:ಸಾಮಾನ್ಯ ಹುದ್ದೆ:2022-23, ದಿ: 02.03.2023ರ ನಿರ್ದೇಶನದಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ

| ಕ್ರ.ಸಂ | ವಿಷಯ | ಹುದ್ದೆಗಳ ಸಂಖ್ಯೆ | ಮೀಸಲಾತಿ |
|---|---|---|---|
| 01 | ರಾಜ್ಯಶಾಸ್ತ್ರ | 01 | ಪರಿಶಿಷ್ಟಜಾತಿ |
| 02 | ವಾಣಿಜ್ಯಶಾಸ್ತ್ರ | 01 | ಪರಿಶಿಷ್ಟಜಾತಿ |
| 03 | ಶಿಕ್ಷಣಶಾಸ್ತ್ರ | 01 | ಸಾಮಾನ್ಯವರ್ಗ |
| 04 | ಸಮಾಜಶಾಸ್ತ್ರ | 01 | ಪರಿಶಿಷ್ಟಜಾತಿ |
| 05 | ಗ್ರಂಥಪಾಲಕರು | 01 | ಪರಿಶಿಷ್ಟಜಾತಿ |

1. ಅರ್ಜಿಯನ್ನು ತಮ್ಮ ಪೂರ್ಣ ಸ್ವವಿವರ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ದೃಢೀಕೃತ ಪ್ರತಿಗಳು ಹಾಗೂ ಮೀಸಲಾತಿಯ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದುಕೊಂಡಿರುವ ಪ್ರಮಾಣಪತ್ರದ ದೃಢೀಕೃತ ಪ್ರತಿಗಳೊಂದಿಗೆ ರೂ. 3000/- (ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ. 2000/-) ಬ್ಯಾಂಕ್ ಹುಂಡಿಯನ್ನು President, DMN Association, Chitradurga. ಇವರಿಗೆ ಸಂದಾಯವಾಗುವಂತೆ ಪಡೆದು ಎಲ್ಲಾ ದಾಖಲೆಗಳನ್ನು ಅಧ್ಯಕ್ಷರು, ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ (ರಿ.), ಕಾಮನಬಾವಿ ಬಡಾವಣೆ, ಚಿತ್ರದುರ್ಗ-577501 ಇಲ್ಲಿಗೆ ಪತ್ರಿಕೆಯಲ್ಲಿ ಪ್ರಕಟಣೆಗೊಂಡ ದಿನಾಂಕದಿಂದ 21 ದಿನಗಳೊಳಗಾಗಿ ರಿಜಿಸ್ಟರ್ ಅಥವಾ ಸ್ಪೀಡ್ ಪೋಸ್ಟ್ ಮೂಲಕ ತಲುಪಿಸುವುದು. ಲಕೋಟೆಯ ಮೇಲೆ ಯಾವ ಹುದ್ದೆಗೆ ಅರ್ಜಿ ಸಲ್ಲಿಸಲಾಗಿದೆ ಎಂದು ಸ್ಪಷ್ಟವಾಗಿ ನಮೂದಿಸುವುದು.

2. ವಯೋಮಿತಿ: ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಇವರಿಗೆ ಗರಿಷ್ಠ 45 ವರ್ಷ, ಇತರೆ ಹಿಂದುಳಿದ ವರ್ಗ ಗರಿಷ್ಠ 43 ವರ್ಷ ಮತ್ತು ಸಾಮಾನ್ಯ ವರ್ಗ ಗರಿಷ್ಠ 40 ವರ್ಷಗಳನ್ನು ಮೀರಿರಬಾರದು. ದಿನಾಂಕ: 13.12.2018ರ ಸಂಖ್ಯೆ: ED/87/UPC/2016ರ ಸರ್ಕಾರದ ಸೇರ್ಪಡೆ ಆದೇಶದನ್ವಯ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ಮೇಲಿನಂತೆ ವಯೋಮಿತಿಯನ್ನು ನಿಗದಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಯನ್ನು ಗರಿಷ್ಠ ವಯೋಮಿತಿಯಲ್ಲಿ ವಿನಾಯತಿಯನ್ನು ನೀಡಲಾಗುವುದು.

3. ವಿದ್ಯಾರ್ಹತೆ: ಸಂಬಂಧಪಟ್ಟ ವಿಷಯದಲ್ಲಿ ಕನಿಷ್ಠ 55% ಅಂಕ ಪಡೆದು ತೇರ್ಗಡೆಯಾಗಿರಬೇಕು (ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಕನಿಷ್ಠ 50% ಅಂಕಗಳು) ಹಾಗೂ NET/SLET ಪರಿಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕೋರ್ಸ್‌ವರ್ಕ್ ಮೂಲಕ PhD ಪದವಿ ಪಡೆದ ಅಭ್ಯರ್ಥಿಗಳಿಗೆ NET/SLET ಪರಿಕ್ಷೆಯಿಂದ ವಿನಾಯಿತಿ ನೀಡಲಾಗುವುದು. ಒಂದು ವೇಳೆ ದಿನಾಂಕ: 11.07.2009ರ ಪೂರ್ವದಲ್ಲಿ Phd ಪದವಿ ಪಡೆದಿದ್ದಲ್ಲಿ/PhDಗೆ ನೊಂದಣಿ ಮಾಡಿಸಿದ್ದಲ್ಲಿ ಅಂತಹ ಅಭ್ಯರ್ಥಿಗಳು ದಿನಾಂಕ: 04.05.2016ರ UGC ಅಧಿಸೂಚನೆಯಲ್ಲಿ ಹೊರಡಿಸಿರುವ ನಿಯಮಗಳನ್ನು ಪೂರೈಸುವ ಷರತ್ತುಗಳಿಗೆ ಒಳಪಟ್ಟಿರುತ್ತದೆ.

4. ವೇತನ ಶ್ರೇಣಿ ಮತ್ತು ಇತರೆ ನಿಬಂಧನೆಗಳು: UGC ನಿಯಾಮಾವಳಿ ಮತ್ತು ಸರ್ಕಾರದ ಆದೇಶಗಳನ್ವಯ ಇರುತ್ತದೆ.

5. ಈಗಾಗಲೇ ಸರ್ಕಾರಿ/ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭ್ಯರ್ಥಿಗಳು ತಾವು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯಿಂದ ನಿರಾಕ್ಷೇಪಣಾ ಪತ್ರವನ್ನು ಒದಗಿಸಬೇಕು.

6. ಅಪೂರ್ಣವಾದ ಹಾಗೂ ಕಡೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

7. ಆಯ್ಕೆ ಪ್ರಕ್ರಿಯೆಯು ಯಾವುದೇ ಹಂತದಲ್ಲಾದರೂ ಸದರಿ ಹುದ್ದೆಯ ಅನುಮತಿ ಮತ್ತು ಆಯ್ಕೆಯನ್ನು ಇಲಾಖೆ/ಸರ್ಕಾರವು ರದ್ದುಪಡಿಸುವ ಅಧಿಕಾರವನ್ನು ಹೊಂದಿರುತ್ತದೆ. ಅರ್ಜಿ ಸಲ್ಲಿಸಿರುವ ಹಾಗೂ ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ಸದರಿ ಹುದ್ದೆಯ ನೇಮಕಾತಿ ಪಕ್ಕೆಂದು ಪರಿಗಣಿಸುವಂತಿಲ್ಲ.

8. ಅರ್ಜಿದಾರರು ಒಂದು ನಕಲು ಪ್ರತಿಯನ್ನು ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ-577203 ಇವರಿಗೆ ಕಳುಹಿಸಬೇಕು.

ಸಹಿ/- ಅಧ್ಯಕ್ಷರು

ದಿನಾಂಕ: 06.03.2023 ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ (ರಿ.), ಚಿತ್ರದುರ್ಗ